Legislature. I don't think anyone would indulge in it, much less the Government.

ತಾವು ಹೇಳಿರತಕ್ಕದ್ದು ಎಲ್ಲವನ್ನೂ ನಾನು ಕೇಳಿದ್ದೇನೆ. ನನ್ನ ತೀರ್ಮಾನವನ್ನು ನಾನು ಕಾದಿರಿಸಿದ್ದೇನೆ.

ಆ. ಅ! ಪ್ರಕಟಣೆ

ಅಧ್ಯಕ್ಷರು : ವಿಧಾನ ಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶಗಳು ಬಂದಿವೆ.

1. ಕರ್ನಾಟಕ ಆಡಳಿತಾತ್ಮಕ ಪ್ರಕ್ರಿಯಾ ವಿಧೇಯಕದ ಜಂಟಿ ಪರಿಶೀಲನಾ ಸಮಿತಿಯು ತನ್ನ ವರದಿಯನ್ನು ಸಭೆಗೆ ಒಪ್ಪಿಸಲು 1992ರ ಸೆಪ್ಟೆಂಬರ್ ತಿಂಗಳ ಅಂತ್ಯದವರೆಗೂ ಕಾಲಾವಧಿಯನ್ನು ವಿಸ್ತರಿಸಲಾಗಿದೆ ಎಂಬ ಪ್ರಸ್ತಾವಕ್ಕೆ ದಿನಾಂಕ 31ನೇ ಮಾರ್ಚ್ 1992ರಂದು ವಿಧಾನ ಪರಿಷತ್ತು ಅನುಮೋದನೆ ನೀಡಿದೆ.

2. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 114ರ ಮೇರೆಗೆ ವಿಧಾನ ಸಭೆಯಿಂದ ಅಂಗೀಕಾರವಾದ ಈ ಕೆಳಕಂಡ ವಿಧೇಯಕಗಳು ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ದಿನಾಂಕ : 31–3–1992ರಂದು ಅನುಮೋದಿಸಲಾಯಿತೆಂದು ತಿಳಿಸುತ್ತೇನೆ.
   1) ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ, 1992.
   2) ಕರ್ನಾಟಕ ವೃತ್ತಿಗಳು, ಕಸಬುಗಳು, ಆಜೀವಿಕೆಗಳು ಮತ್ತು ಉದ್ಯೋಗಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕ, 1992.
   3) ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕ, 1992.
   4) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ, 1992.
   5) ಕರ್ನಾಟಕ ವಿಧಾನಮಂಡನದವರ ವೇತನಗಳು ನಿವೃತ್ತಿ ವೇತನಗಳು, ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 1992.
   6) ಕರ್ನಾಟಕ ಭೂ ಸುಧಾರಣಾ (ತಿದ್ದುಪಡಿ) ವಿಧೇಯಕ, 1992.
   7) ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ (ತಿದ್ದುಪಡಿ) ವಿಧೇಯಕ, 1992.
   8) ಕರ್ನಾಟಕ ಹೋಮಿಯೋಪತಿ, ವೃತ್ತಿನಿರತ ವೈದ್ಯರ (ತಿದ್ದುಪಡಿ) ವಿಧೇಯಕ, 1992.
   9) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕ, 1992.
   10) ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೃತ್ತಿನಿರತ ವೈದ್ಯರ ನೊಂದಣಿ ಮತ್ತು ವೈದ್ಯಕೀಯ ವೃತ್ತಿನಿರತರ ಸಂಕೀರ್ಣ ಉಪಬಂಧಗಳ (ತಿದ್ದುಪಡಿ) ವಿಧೇಯಕ, 1992.
   11) ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ, 1992.

3. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 114ರ ಮೇರೆಗೆ ವಿಧಾನಸಭೆಯಿಂದ ಅಂಗೀಕಾರವಾದ ಈ ಕೆಳಕಂಡ ವಿಧೇಯಕಗಳು ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ದಿನಾಂಕ 1ನೇ ಏಪ್ರಿಲ್, 1992 ರಂದು ಅನುಮೋದಿಸಲಾಯಿತೆಂದು ತಿಳಿಸುತ್ತೇನೆ.
   1) ಕನ್ನಡ ವಿಶ್ವವಿದ್ಯಾನಿಲಯ (ತಿದ್ದುಪಡಿ) ವಿಧೇಯಕ, 1992.
   2) ಮೈಸೂರು (ವೈಯುಕ್ತಿಕ ಹಾಗೂ ಸಂಕೀರ್ಣ) ಇನಾಮು ರದ್ದಿಯಾತಿ (ತಿದ್ದುಪಡಿ) ವಿಧೇಯಕ, 1992.

1. ಗಮನ ಸೆಳೆಯುವ ಸೂಚನೆ

ವಿಷಯ : ಔಷದ, ರಾಸಾಯನಿಕ ವಸ್ತುಗಳು ಮತ್ತು ಆಸ್ಪತ್ರೆ ಉಪಕರಣಗಳನ್ನು ಸರಬರಾಜು ಮಾಡುವಲ್ಲಿ ಆರೋಗ್ಯ ಮತ್ತು ಪಿಟುರಬ ಕಲ್ಯಾಣ ಇಲಾಖೆಯವರು ಟೆಂಡರನ್ನು ಪುರ್ನವಿಮರ್ಶಿಸಿದ್ದರಿಂದ ಸರ್ಕಾರಕ್ಕೆ ಉಂಟಾದ ನಷ್ಟದ ಬಗ್ಗೆ.